## ಟ್ರೆನ್ಸರಿಯಲ್ ಇಲಾಖಾ.

ತಾರೀಖು 26ನೆ ಫೆಬ್ರವರಿ 1909.

1909ನೆ ಇಸವಿ ಏಪ್ರೆಲ್ 1ನೆ ತಾರೀಖು ಲಾಗಾಯಿತು 1909ನೆ ಇಸವಿ ಜೂ೯ 30ರ ವರಿಗೆ ಕೆಳಗೆ ನಮೂದಿಸಿರುವ ಖಜಾನೆಗಳ ಮೇಲೆ ಹುಂಡಿಗಳಿಗೆ (Supply Bills) ಅಪ್ಲಿಕೇಷ೯ಗಳನ್ನು ಮೈಸೂರು ಸೀಮೆಯ ಶ್ರೀಮತ್ ಮಹಾರಾಜರವರ ಸರ್ಕಾರದ ಕಂಟ್ರೋಲರು ತೆಗೆದುಕೊಳ್ಳುತ್ತಾರೆ. ಪ್ರತಿಯೊಂದು ಅಪ್ಲಿಕೇಷ೯ನಲ್ಲಿಯೂ ಈ ಕೆಳಗೆ ತೋರಿಸಿರುವ ವಿವರಗಳು ಇರಬೇಕು.

1. ಹುಂಡಿ ಮೊಬಲಗು.
2. ಹಣ ಪಾವತಿಯಾಗಬೇಕಾದ ಖಜಾನೆಯ ಹೆಸರು.

ಮತ್ತು 3. ಹುಂಡಿಗೆ ಅಪ್ಲಿಕೇಷ೯ ಹಾಕುವವರ ಹೆಸರು ಮತ್ತು ವಿಳಾಸ.

2. 500 ರೂಪಾಯಿಗಳಿಗಿಂತ ಕಡಿಮೆ ಮೊಬಲಗಿಗೆ ಹುಂಡಿಯು ಕೊಡಲ್ಪಡುವದಿಲ್ಲ.

3. ಅಪ್ಲಿಕೇಷನ್ನು ಅಂಗೀಕರಿಸುವ ಪಕ್ಷದಲ್ಲಿ ಆ ವಿಚಾರವು ಅಪ್ಲಿಕೇಷ೯ ಹಾಕಿರುವವರಿಗೆ ತಿಳಿಸಲ್ಪಡುವದಲ್ಲದೆ, ಸ್ಟೇಟ್ ಹುಜೂರು ಟ್ರೆಜರಿ ಆಫಿಸರಿಗೆ ಹುಂಡಿಯ ಮೊಬಲಗನ್ನು ಮತ್ತು ಕೆಳಗೆ ನಮೂದಿಸಿರುವ ದರದಮೇರೆ ಕಮಿಷನನ್ನೂ ತೆಗದು ಕ್ಕೊಂಡು ಹುಂಡಿಯನ್ನು ಕೊಡುವದಕ್ಕೆ ಅಧಿಕಾರವು ಕೊಡಲ್ಪಡುತ್ತದೆ.

| ಹುಂಡಿ ಕೊಡುವ ಖಜಾನೆ ಹೆಸರು. | ಹಣ ಪಾವತಿಯಾಗಬೇಕಾದ ಖಜಾನೆ ಹೆಸರು. | ಕಮಿಷ೯ ದರ. |
|---|---|---|
| ಸ್ಟೇಟ್ ಹುಜೂರ್. | ಕೋಲಾರ.<br>ತುಮಕೂರು.<br>ಶಿವಮೊಗ.<br>ಕಡೂರು.<br>ಚಿತ್ರದುರ್ಗ.<br>ಮೈಸೂರು.<br>ಹಾಸನ. | ಶೇಕಡ $\frac{1}{16}$ |

ಜೆ. ಎಸ್. ಚಕ್ರವರ್ತಿ,
ಕಂಟ್ರೋಲರ್.

## ಫಾರೆಸ್ಟ್ ಇಲಾಖಾ.

ತಂಗಡಿ ಮತ್ತು ಕಕ್ಕೆ ಚಕ್ಕೆ—ಇಸ್ತಹಾರು, ತಾರೀಖು 16ನೆ ಮೇ 1909.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಮೈಸೂರು ಡಿಸ್ಟ್ರಿಕ್ಟ್‌ಗೆ ಶೇರಿದ ಎಲ್ಲಾ ತಾಲ್ಲೂಕುಗಳಲ್ಲಿನ ತಂಗಡಿ ಮತ್ತು ಕಕ್ಕೆ ಚಕ್ಕೆಯನ್ನು ಈ ಕೆಳಗೆ ತಪಶೀಲು ನಮೂದು ಮಾಡಿರುವ ಕಾಲಗಳಲ್ಲಿ ರೂಢಿನ ಜಮಾಯಿಸತಕ್ಕ ಹಕ್ಕನ್ನು ಪಡಿಯಲು 1909ನೆ ಇಸವಿ ಜೂ೯ ತಾರೀಖು 19ರ ವರಿಗೆ ಮೈಸೂರು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫೀಸಿನಲ್ಲಿ ದರಖಾಸ್ತುಗಳು ತೆಗದು ಕೊಳ್ಳಲ್ಪಡುವದು :—

| ಜಮಾಯಿಸತಕ್ಕ ಕಾಲ. | ಷರಾ. |
|---|---|
| 1909ನೆ ಜುಲೈ 15ರ ಲಾಗಾಯಿತು 1910ನೆ ಜೂ೯ ಆಖೈರು ವರಿಗೆ. | ಇನಾಂ, ಜೋಡಿ, ಕಾಯಂಗುತ್ತಾ, ಸರ್ವಮಾನ್ಯ, ಕಂದಾಯ ಮತ್ತು ಹಿಡುವಳಿಯಲ್ಲಿರುವ ಇತರ ಜಮೀನುಗಳಲ್ಲಿನ ಫಸಲು ಈ ಹರಾಜಿಗೆ ಶೇರುವದಿಲ್ಲ.<br><br>ಆದರೆ ಅವ್ಯತವಾಹಲ್ ಕಾವಲು ಮತ್ತು ಆಕಾರಕಂಡ ಸರ್ಕಾರಿ ಬಂಜರು ಆಕಾರ ಕಾಣದ ಸರ್ಕಾರಿ ಬಂಜರು ಗೋಮಾಳ ಸ್ಟೇಟ್ ಫಾರೆಸ್ಟ್ ಈ ಜಮೀನುಗಳಲ್ಲಿರುವ ಚಕ್ಕೆಯು ಕಂಟ್ರಾಕ್ಟಿಗೆ ವಳ ಪಟ್ಟು ಇರುತ್ತೆ. |

(2) ತಾಲ್ಲೂಕು ಹೆಸರು ಮತ್ತು ದರಖಾಸ್ತು ಮಾಡಲ್ಪಟ್ಟ ಮೊಬಲಗು ಸಹ ದರಖಾಸ್ತುಗಳಲ್ಲಿ ನಮೂದಿಸಬೇಕು.

(3) ಪ್ರತಿ ಒಂದು ದರಖಾಸ್ತಿನೊಡನೆ ಪ್ರತಿ ತಾಲ್ಲೂಕು ಸವಾಲಿಗೂಸ್ಕರ (50) ರೂಪಾಯಿನ ಕರ್ಟಿಸಿ ನೋಟ್ ಠೇವಣಿ ಬಗ್ಗೆ ಕಳುಹಿಸಬೇಕು. ತಪ್ಪಿದಲ್ಲಿ ದರಖಾಸ್ತುಗಳು ತಿರಸ್ಕರಿಸಲ್ಪಡುವವು. ದರಖಾಸ್ತುಗಳು ರಿಜಿಸ್ಟರ್ ಮತ್ತು ಇನ್ಷೂರ್ ಮಾಡಿ ಲಿಫಾಫೀ ಮೇಲೆ "ತಂಗಡಿ ಮತ್ತು ಕಕ್ಕೆ ಚಕ್ಕೆಯ ದರಖಾಸ್ತು" ಎಂದು ಬರದು ಮೈಸೂರು ಡಿಸ್ಟ್ರಿಕ್ಟ್ ಫಾರೆಸ್ಟ್ ಆಫಿಸರವರ ವಿಳಾಸಕ್ಕೆ ರವಾನಿಸಬೇಕು.